78.	Sindanur	1	30.76	137
79.	Sirguppa	2	380.96	751
80.	Somwarpet	2	52.73	480
81.	Srirangapattana	2	409.8	370
82.	T. Narasapura	1	94.76	215
83.	To be decided	3	10096.97	1530
84.	Tumkur	3	49.57	304
85.	Udupi	1	280	205
	Total	**389**	**392640.37**	**710792**

ಗೌರಿಬಿದನೂರು ತಾಲ್ಲೂಕಿನಲ್ಲಿ ಕೈಗಾರಿಕೆಗಳು

289 (703) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು):–(ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ 750 ಎಕರೆ ಜಮೀನನ್ನು ಎರಡು ಹಂತಗಳಲ್ಲಿ ಸರ್ಕಾರ ಸ್ವಾಧೀನಪಡಿಸಿಕೊಂಡಿರುವುದೇ?

ಆ) ಹಾಗಿದ್ದಲ್ಲಿ, ಕೈಗಾರಿಕೆಯನ್ನು ಎಂದು ಪ್ರಾರಂಭಿಸಲಾಗುವುದು?

ಇ) ಇತ್ತೀಚಿನ ದಿನಗಳಲ್ಲಿ ಬೆಂಗಳೂರಿನಲ್ಲಿ ನಡೆದ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಅನೇಕ ಕಂಪನಿಗಳ ಒಡಂಬಡಿಕೆ ಮಾಡಿಕೊಂಡಿದ್ದು, ಇಂತಹ ದೊಡ್ಡ ಪ್ರಮಾಣದ ಕೈಗಾರಿಕೆಗಳನ್ನು ಕುಡುಮಲಕುಂಟೆ ಕೈಗಾರಿಕಾ ಪ್ರದೇಶದಲ್ಲಿ ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿರುವುದೇ?

ಶ್ರೀ ಮುರುಗೇಶ್ ಆರ್. ನಿರಾಣಿ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು):–

ಅ) ಮೊದಲನೇ ಹಂತದಲ್ಲಿ 239–38 ಎಕರೆಗೆ ಅಂತಿಮ ಅಧಿಸೂಚನೆ ಹೊರಡಿಸಿದೆ.

ಎರಡನೇ ಹಂತದಲ್ಲಿ 496 ಎಕರೆ ಸ್ವಾಧೀನಪಡಿಸಿಕೊಳ್ಳಲು ಪ್ರಾಥಮಿಕ ಅಧಿಸೂಚನೆ ಹೊರಡಿಸಿದೆ. ಕಲಂ 28(3)ರ ವಿಚಾರಣೆ ಹಾಗೂ ಜಂಟಿ ಅಳತೆ ಕಾರ್ಯ ಪ್ರಗತಿಯಲ್ಲಿದೆ.

ಆ) ಭೂಸ್ವಾಧೀನಪಡಿಸಿರುವ 239–38 ಎಕರೆ ಜಮೀನನ್ನು ಮಂಡಳಿಯು ಕೈಗಾರಿಕಾ ಪ್ರದೇಶವನ್ನಾಗಿ ಅಭಿವೃದ್ಧಿಪಡಿಸುತ್ತಿದ್ದು, ಕೈಗಾರಿಕಾ ಬಡಾವಣೆ ಕಾರ್ಯ ಅಂತಿಮ ಹಂತದಲ್ಲಿದೆ.

ಈಗಾಗಲೇ ಮಧ್ಯಮ ಪ್ರಮಾಣದ 51 ಕೈಗಾರಿಕೆಗಳಿಗೆ ರಾಜ್ಯ ಮಟ್ಟದ ಏಕ ಹವಾಕ್ಷಿ ಸಮಿತಿಯಿಂದ ಹಂಚಿಕೆಗೆ ಅನುಮೋದನೆಯಾಗಿರುತ್ತದೆ ಹಾಗೂ ಸಣ್ಣ ಪ್ರಮಾಣದ 19 ಕೈಗಾರಿಕೆಗಳಿಗೆ ಜಿಲ್ಲಾ ಮಟ್ಟದ ಹಂಚಿಕೆ ಸಮಿತಿ ಸಭೆಯಲ್ಲಿ ಅನುಮೋದನೆಯಾಗಿರುತ್ತದೆ. ಬಡಾವಣೆ ಕಾರ್ಯ ಪೂರ್ಣಗೊಂಡ ನಂತರ ಹಂಚಿಕೆ ಪತ್ರವನ್ನು ನೀಡಲಾಗುವುದು. ತದನಂತರ ಕೈಗಾರಿಕೆಗಳು ಬರಲಿವೆ.

ಇ) ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಯಾವುದೇ ದೊಡ್ಡ ಪ್ರಮಾಣದ ಕೈಗಾರಿಕೆಗಳು ಕುಡುಮಲಕುಂಟೆ ಕೈಗಾರಿಕಾ ಪ್ರದೇಶದಲ್ಲಿ ನಿವೇಶನ ಕೋರಿ, ಬೇಡಿಕೆ ಸಲ್ಲಿಸಿಲ್ಲ.

ಜವಳಿ ಪಾರ್ಕ್

290 (704) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು):–(ಮಾನ್ಯ ಜವಳಿ, ಯುವಜನ ಸೇವೆ ಹಾಗೂ ಕ್ರೀಡಾ ಸಚಿವರು) ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಗೌರಿಬಿದನೂರು ತಾಲ್ಲೂಕು ಕುಡಮಲಕುಂಟೆ ಪ್ರದೇಶದಲ್ಲಿ ಸರ್ಕಾರದ ಸುಮಾರು 750 ಎಕರೆ ಜಮೀನು ಭೂ ಸ್ವಾಧೀನಪಡಿಸಿಕೊಂಡಿರುವುದೇ

ಆ) ಹಾಗಿದ್ದಲ್ಲಿ, ಇದರಲ್ಲಿ ಜವಳಿ ಪಾರ್ಕ್ ಪ್ರಾರಂಭಿಸಲು ಯೋಜಿಸಲಾಗಿದೆಯೇ, ಯೋಜಿಸಿದ್ದಲ್ಲಿ, ಎಂದಿನಿಂದ ಪ್ರಾರಂಭ ಮಾಡಲಾಗುವುದು?

ಶ್ರೀ ಗೂಳಿಹಟ್ಟಿ ಡಿ. ಶೇಖರ್ (ಜವಳಿ, ಯುವಜನ ಸೇವೆ ಹಾಗೂ ಕ್ರೀಡಾ ಸಚಿವರು):–

ಅ) ಹೌದು

ಆ) ಈ ರೀತಿಯ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ

ನೇಕಾರರಿಗೆ ಮನೆ ಮಂಜೂರಾತಿ

292 (649) ಶ್ರೀ ಸಿದ್ದು ಸವದಿ (ತೇರದಾಳ):–(ವಿಧಾನ ಸಭೆ ಸದಸ್ಯರು) (ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ಸಚಿವರು) ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ 2009–10 ಮತ್ತು 2010–11ನೇ ಸಾಲಿನಲ್ಲಿ ಬಡ ನೇಕಾರರಿಗೆ ಒದಗಿಸಿದ ಮನೆಗಳ ಸಂಖ್ಯೆ ಎಷ್ಟು?

ಆ) ತೇರದಾಳ ಮತ ಕ್ಷೇತ್ರದಲ್ಲಿ ಅತೀ ಹೆಚ್ಚಿನ ಸಂಖ್ಯೆಯಲ್ಲಿ ಬಡ ಕೈಮಗ್ಗ